ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ ಇವರ ಕಛೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ವಲಅ–ವಿವ–5/2015–16, ದಿನಾಂಕ: 22.03.2016**

## 72 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

ಕರ್ನಾಟಕ ಅರಣ್ಯ ಇಲಾಖೆಯಲ್ಲಿ 72 ವಲಯ ಅರಣ್ಯಾಧಿಕಾರಿ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡುವ ಸಂಬಂಧ ಈಗಾಗಲೇ ಅರ್ಜಿಗಳನ್ನು ಸ್ವೀಕರಿಸಲಾಗಿರುತ್ತದೆ ಹಾಗೂ ಈ ಕಛೇರಿಯ ದಿನಾಂಕ: 23.07.2016 ರ ಪ್ರಕಟಣೆಯಲ್ಲಿ ಸ್ವೀಕರಿಸಲಾಗಿರುವ ಅರ್ಜಿಗಳಲ್ಲಿ ಕೆಲವು ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆ ಕುರಿತು ಸಲ್ಲಿಸಿರುವ ದಾಖಲೆಗಳು ಸರಿಯಾಗಿ ಇಲಾಖಾ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡದೆ ಇರುವುದರಿಂದ ಈ ದಾಖಲೆಗಳು ಸರಿಯಾಗಿ ಕಾಣಿಸುತ್ತಿಲ್ಲ ಮತ್ತು ಕೆಲವು ಅಭ್ಯರ್ಥಿಗಳು ನಿಗಧಿಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆಯ ಪ್ರಮಾಣ ಪತ್ರಗಳನ್ನು ಇಲಾಖಾ ವೆಬ್‌ಸೈಟ್‌ಗೆ ಅಪ್‌ಲೋಡ್ ಮಾಡಿರುವುದಿಲ್ಲ. ಹೀಗಾಗಿ, ದಿನಾಂಕ: 06.08.2016 ರ ಸಂಜೆ 5.30 ರೊಳಗಾಗಿ ಇಲಾಖಾ ವೆಬ್‌ಸೈಟ್‌ಗೆ ನಿಗಧಿತ ದಾಖಲೆಗಳನ್ನು ಅಪ್‌ಲೋಡ್ ಮಾಡಲು ಸಮಯಾವಕಾಶ ನೀಡಲಾಗಿತ್ತು. ಈ ಎಲ್ಲಾ ಕ್ರಮಗಳನ್ನು ಕೈಗೊಂಡು ಪ್ರಸ್ತುತ ಪೂರ್ವಬಾವಿ ಪರೀಕ್ಷೆ ಬರೆಯಲು ಅರ್ಹ ಇರುವ 11874 ಅಭ್ಯರ್ಥಿಗಳ ಪಟ್ಟಿಯನ್ನು ಹಾಗೂ ವಿವಿಧ ಕಾರಣಗಳಿಂದ ಅನರ್ಹಗೊಂಡಿರುವ 458 ಅಭ್ಯರ್ಥಿಗಳ ಪಟ್ಟಿಯನ್ನು ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ. ಈಗಾಗಲೇ ದಿನಾಂಕ: 08.08.2016 ರ ಪ್ರಕಟಣೆಯಲ್ಲಿ ಪೂರ್ವಬಾವಿ ಪರೀಕ್ಷೆಯ ವೇಳಾಪಟ್ಟಿಯನ್ನು ಸಹ ಪ್ರಕಟಿಸಲಾಗಿದೆ.

ಬೆಂಗಳೂರು,
ದಿನಾಂಕ: 16–08–2016

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)